ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರುವರಿ, 2021

ಪಂಚಾಯ್ತಿಗಳಿಗೆ ಬಿಡುಗಡೆಯಾದ ಅನುದಾನದ ಕುರಿತು

ಡಾ. ವೈ. ಎ. ನಾರಾಯಣಸ್ವಾಮಿ(ಶಿಕ್ಷಕರ ಕ್ಷೇತ್ರ) -

84 (536) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕಳೆದ 5 ವರ್ಷಗಳಲ್ಲಿ ಕೋಲಾರ ಜಿಲ್ಲೆಯ ಪಂಚಾಯಿತಿಗಳಿಗೆ ವಿವಿಧ ಯೋಜನೆ ಅಡಿಯಲ್ಲಿ ಬಿಡುಗಡೆಯಾದ ಹಣ ಹಾಗೂ ಖರ್ಚು ಮಾಡಲಾದ ಹಣ ಎಷ್ಟು; ದುರುಪಯೋಗಪಡಿಸಿಕೊಂಡಿರುವ ಹಣ ಎಷ್ಟು; (ಪಂಚಾಯಿತಿವಾರು ವಿವರ ನೀಡುವುದು)

(ಆ) ಕಳೆದ 5 ವರ್ಷಗಳಲ್ಲಿ ನರೇಗಾ ಅಡಿಯಲ್ಲಿ ಕೋಲಾರ ಜಿಲ್ಲಾ ವ್ಯಾಪ್ತಿಯ ಎಲ್ಲಾ ಪಂಚಾಯ್ತಿಗಳಿಗೆ ಬಿಡುಗಡೆಯಾದ ಹಣ ಎಷ್ಟು; ಸೃಜಿಸಿದ ಮಾನವ ದಿನಗಳೆಷ್ಟು; ಹಾಗೂ ಇದರಿಂದ ಸೃಷ್ಠಿಯಾದ ಆಸ್ತಿ (Asset) ಎಷ್ಟು;

(ಇ) ನರೇಗಾ ಹಣ ದುರುಪಯೋಗಪಡಿಸಿಕೊಂಡ ಪಂಚಾಯಿತಿಗಳು ಯಾವುವು; ಹಾಗೂ ಹಣ ದುರುಪಯೋಗಪಡಿಸಿಕೊಂಡ ಅಧಿಕಾರಿಗಳು, ಜನಪ್ರತಿನಿಧಿಗಳು ಯಾರ್ಯಾರು; (ವಿವರ ನೀಡುವುದು)

(ಈ) ಇಂತಹ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗೂ ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು? (ಪ್ರಕರಣವಾರು ವಿವರ ನೀಡುವುದು)